ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 26-12-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | **UniversSity of Agricultural Science Global Alumni Meet – 2015**<br>**Inauguration:**<br>**Dr M.S. Swaminathan, Founder Chairman, MSSR Foundation, Chennai.** | **27-12-2015 Sunday at 10-00 AM** | **UAS –B, Alumni Association, Hebbal Campus, Bengaluru - 24** |
| 2. | "ಕನ್ನಡ ಹಬ್ಬ" ಕನ್ನಡ ಸಾಂಸ್ಕೃತಿಕ ಉತ್ಸವ ಹಾಗೂ ಅನ್ಯ ಭಾಷಿಕರಿಗೆ ಕನ್ನಡ ಕಲಿಸುವ ಕಾರ್ಯಕ್ರಮ:<br>ಉದ್ಘಾಟನೆ:<br>ಶ್ರೀಮತಿ ಉಮಾಶ್ರೀ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು<br>ಅಧ್ಯಕ್ಷತೆ:<br>ಮುನಿರತ್ನ<br>ಶಾಸಕರು<br>ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ.<br>ಮುಖ್ಯ ಅತಿಥಿ:<br>ಕೆ.ಜೆ. ಜಾರ್ಜ್, ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಹಾಗೂ ಬೆಂಗಳೂರು ಉಸ್ತುವಾರಿ ಸಚಿವರು | 27-12-2015 ಭಾನುವಾರ ಸಂಜೆ 5-30 ಗಂಟೆಗೆ | ಪ್ಲಾಟಿನಂ ಸಿಟಿ ಅಪಾರ್ಟ್‌ಮೆಂಟ್, ನಂ 2, ಹೆಚ್. ಎಂ. ಟಿ. ರಸ್ತೆ, ಯಶವಂತಪುರ, ಬೆಂಗಳೂರು – 560 022 |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ಸಚಿವ ಸಂಪುಟ ಸಭೆ

**ಬೆಂಗಳೂರು, ಡಿಸೆಂಬರ್ 26 (ಕರ್ನಾಟಕ ವಾರ್ತೆ)**

2015 ನೇ ಸಾಲಿನ ರಾಜ್ಯ ಸಚಿವ ಸಂಪುಟದ 27 ನೇ ಸಭೆಯು ದಿನಾಂಕ 28-12-2015 ರಂದು ಸಂಜೆ 4-00 ಗಂಟೆಗೆ ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಸಚಿವ ಸಂಪುಟ ಸಭಾಮಂದಿರದಲ್ಲಿ ಜರುಗಲಿದೆ.

ಪೂರ್ಣಿಮ:ಜಿಪಿಆರ್.

## ಕುವೆಂಪು ಜನ್ಮದಿನಾಚರಣೆ:
## ವಿಶ್ವ ಮಾನವ ದಿನಾಚರಣೆಯನ್ನಾಗಿ ಆಚರಿಸಲು ಸರ್ಕಾರ ನಿರ್ಧಾರ

**ಬೆಂಗಳೂರು, ಡಿಸೆಂಬರ್ 26 (ಕರ್ನಾಟಕ ವಾರ್ತೆ)**

ಡಿಸೆಂಬರ್ 29 ರಂದು ಆಚರಿಸಲ್ಪಡುವ ರಾಷ್ಟ್ರಕವಿ ಕುವೆಂಪು ಜನ್ಮ ದಿನಾಚರಣೆಯನ್ನು 'ವಿಶ್ವ ಮಾನವ ದಿನಾಚರಣೆ'ಯನ್ನಾಗಿ ಪ್ರತಿ ವರ್ಷ ಆಚರಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಸಹ ಕುವೆಂಪು ಅವರ ವಿಶ್ವಮಾನವ ಸಂದೇಶ ಕುರಿತಂತೆ ವಿಚಾರಗೋಷ್ಠಿಯನ್ನು ಹಮ್ಮಿಕೊಳ್ಳುವ ಮೂಲಕ ಅವರ ಜನ್ಮ ದಿನಾಚರಣೆಯನ್ನು "ವಿಶ್ವಮಾನವ ದಿನಾಚರಣೆ" ಯನ್ನಾಗಿ ಆಚರಿಸುವಂತೆ ಕನ್ನಡ ಸಂಸ್ಕೃತಿ ಇಲಾಖೆ ಕಾರ್ಯದರ್ಶಿಗಳು ಸೂಚನೆ ನೀಡಿದ್ದಾರೆ

ಕವನ:ಜಿಪಿಆರ್.

## "ಕನ್ನಡ ಹಬ್ಬ"
### ಕನ್ನಡ ಸಾಂಸ್ಕೃತಿಕ ಉತ್ಸವ ಹಾಗೂ ಅನ್ಯಭಾಷಿತರಿಗೆ ಕನ್ನಡ ಕಲಿಸುವ ಕಾರ್ಯಕ್ರಮಕ್ಕೆ ಚಾಲನೆ

**ಬೆಂಗಳೂರು, ಡಿಸೆಂಬರ್ 26 (ಕರ್ನಾಟಕ ವಾರ್ತೆ)**

ಬೆಂಗಳೂರಿನ ಅಪಾರ್ಟ್‌ಮೆಂಟ್‌ಗಳಲ್ಲಿ ವಾಸಿಸುತ್ತಿರುವ ಅನ್ಯಭಾಷಿಕರಿಗೆ ಕನ್ನಡ ಭಾಷೆಯನ್ನು ಕಲಿಸಲು ಮತ್ತು ಕನ್ನಡ ಸಂಸ್ಕೃತಿ ಬಗ್ಗೆ ಅರಿವು ಮೂಡಿರುವ ಸಲುವಾಗಿ ಪ್ರಥಮ ಬಾರಿಗೆ ಕನ್ನಡ ಹಬ್ಬ - ಕನ್ನಡ ಸಾಂಸ್ಕೃತಿಕ ಉತ್ಸವವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಎಲ್. ಹನುಮಂತಯ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕನ್ನಡ ಭಾಷೆಯ ಬೆಳವಣಿಗಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಹಲವು ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಯಶಸ್ವಿಯಾಗಿದೆ. ಅದೇ ರೀತಿ ಕನ್ನಡವನ್ನು ಜನಸಮುದಾಯದ ಸಮೀಪಕ್ಕೆ ಕೊಂಡೊಯ್ಯುವ ಉದ್ದೇಶದಿಂದ ಬೆಂಗಳೂರಿನ ಅಪಾರ್ಟ್‌ಮೆಂಟ್ ವೆಲ್ಫೇರ್ ಅಸೋಸಿಯೇಷನ್‌ಗಳ ಸಹಯೋಗದೊಂದಿಗೆ ಯಶವಂತಪುರದ ಪ್ಲಾಟಿನಂ ಅಪಾರ್ಟ್‌ಮೆಂಟ್‌ನಲ್ಲಿ ವಾಸಿಸುತ್ತಿರುವ ಅನ್ಯಭಾಷಿತರಿಗೆ ತಮ್ಮ ದೈನಂದಿನ ವ್ಯವಹಾರಗಳಲ್ಲಿ ಕನ್ನಡ ಸಂಸ್ಕೃತಿಯ ಪರಿಚಯ ಮಾಡಿಕೊಡುವ ಸಲುವಾಗಿ ಡಿಸೆಂಬರ್ 27 ರಂದು ಮಧ್ಯಾಹ್ನ

2.00 ಗಂಟೆಯಿಂದ ರಾತ್ರಿ 8–00 ಗಂಟೆಯವರಿಗೆ ಕನ್ನಡ ಹಬ್ಬ-ಕನ್ನಡ ಸಾಂಸ್ಕೃತಿಕ ಉತ್ಸವ ಹಾಗೂ ಕನ್ನಡ ಕಲಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಅಧ್ಯಕ್ಷರು ತಿಳಿಸಿದ್ದಾರೆ.

ಮಧ್ಯಾಹ್ನ 2 ಗಂಟೆಗೆ "ರಂಗೋಲಿ ಸ್ಪರ್ಧೆ" ಯನ್ನು ಬಿ.ಬಿ.ಎಂ.ಪಿ. ಸದಸ್ಯರಾದ ಶ್ರೀಮತಿ ಆಶಾ ಸುರೇಶ್, ಅವರು, ಮಧ್ಯಾಹ್ನ 3–00 ಗಂಟೆಗೆ ನಡೆಯುವ " ಉಡುಗೆ ತೊಡುಗೆ ಸ್ಪರ್ಧೆ ಮತ್ತು "ಆರೋಗ್ಯ ತಪಸಾಣಾ ಶಿಬಿರ" ವನ್ನು ಪೊಲೀಸ್ ಉಪ ಆಯುಕ್ತರಾದ ಡಾ. ರೋಹಿಣಿ ಕಟೋಚ್ ಸೆಪಟ್ ಅವರು ಉದ್ಘಾಟಿಸಲಿದ್ದಾರೆ. ಸಂಜೆ 4.30 ಕ್ಕೆ ಜಾನಪದ ಕಲಾತಂಡಗಳ ಮೆರವಣಿಗೆಯನ್ನು ಮಾಜಿ ಶಾಸಕರಾದ ಡಾ. ಮುಖ್ಯಮಂತ್ರಿ ಚಂದ್ರು ಅವರು ಉದ್ಘಾಟಿಸಲಿದ್ದಾರೆ.

"ಕನ್ನಡ ಹಬ್ಬ" ವನ್ನು ಸಂಜೆ 5–30 ಗಂಟೆಗೆ ಮಹಿಳಾ ಮತ್ತು ಅಭಿವೃದ್ಧಿ ಇಲಾಖೆ ಸಚಿವರಾದ ಶ್ರೀಮತಿ ಉಮಾಶ್ರೀ ಅವರು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಮುನಿರತ್ನ ಅವರು ವಹಿಸಲಿದ್ದು ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರಾದ ಕೆ.ಜೆ. ಜಾರ್ಜ್ , ಸಂಗೀತ ನಿರ್ದೇಶಕ ಹಂಸಲೇಖ, ನಟ ಜೈಜಗದೀಶ್ ಸೇರಿದಂತೆ ಮತ್ತಿತರ ಗಣ್ಯರು ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಪೂರ್ಣಿಮ:ಕವನ:ಜಿಪಿಆರ್.

## ಸರ್ವೋತ್ತಮ ಸೇವಾ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಡಿಸೆಂಬರ್ 26 (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರವು ಸರ್ಕಾರಿ ನೌಕರರಿಗೆ "ಸರ್ವೋತ್ತಮ ಸೇವಾ ರಾಜ್ಯ ಪ್ರಶಸ್ತಿ' ಯನ್ನು ಜನರಿಗೆ 26, 2016 ರಂದು ನಿರ್ಧರಿಸಿರುವ ಹಿನ್ನೆಲೆಯಲ್ಲಿ, ಉತ್ತಮ ಸೇವೆಗೈದ ಮತ್ತು ಗುಣಾತ್ಮಕ ಆಡಳಿತ ನೀಡಿರುವ ಅಧಿಕಾರಿ / ನೌಕರರು ತಮ್ಮ ಸ್ವವಿವರ ಪರಿಚಯದೊಂದಿಗೆ ಅರ್ಜಿಯನ್ನು ಹಾಗೂ ನಿರ್ವಹಿಸಿರುವ ಕಾರ್ಯದ ಕಿರುಪರಿಚಯವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರ/ಕಾರ್ಯದರ್ಶಿಯವರ ಮುಖೇನ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ದಿನಾಂಕ: 31–12–2016 ರೊಳಗೆ ಸಲ್ಲಿಸುವಮತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕವನ:ಜಿಪಿಆರ್.

## ಮೌಖಿಕ ಸಂದರ್ಶನಕ್ಕೆ ಆಯ್ಕೆಯಾಗಿರುವವರ ಪಟ್ಟಿ ಪ್ರಕಟ

ಬೆಂಗಳೂರು, ಡಿಸೆಂಬರ್ 26 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು 2015ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳ ಕನ್ನಡ ಭಾಷಾ ವಿಷಯದ ಮಾಖಿಕ ಸಂದರ್ಶನಕ್ಕೆ ಅರ್ಹರಾಗಿರುವ ಅಭ್ಯರ್ಥಿಗಳ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ http://kpsc.kar.nic.in` ನಲ್ಲಿ ಪ್ರಕಟಿಸಿದೆ.

ಪಿ.ಡಬ್ಲ್ಯೂ.ಡಿ. ಸರ್ಕ್ಯೂಟ್ ಹೌಸ್, ಬೆಳಗಾವಿ, ನ್ಯೂ-ಐವಾನ್-ಇ-ಶಾಹಿ ಅತಿಥಿ ಗೃಹ, ಕಲಬುರಗಿ, ಪಿ.ಡಬ್ಲ್ಯೂ.ಡಿ. ಸರ್ಕ್ಯೂಟ್ ಹೌಸ್, ಶಿವಮೊಗ್ಗ ಹಾಗೂ ಪಿ.ಡಬ್ಲೂಡಿ ಅತಿಥಿ ಗೃಹ , ಮೈಸೂರಿನಲ್ಲಿ ಡಿಸೆಂಬರ್ 28 ರಂದು, ಕೆ.ಪಿ.ಎಸ್.ಸಿ. ಉದ್ಯೋಗ ಸೌಧ, ಬೆಂಗಳೂರಿನಲ್ಲಿ ಡಿಸೆಂಬರ್ 29 ರಂದು ಮೌಖಿಕ ಸಂದರ್ಶನವನ್ನು ಆಯೋಗದ ಕೇಂದ್ರ ಕಚೇರಿ ಹಾಗೂ ಜಿಲ್ಲಾ ಕಚೇರಿಗಳಲ್ಲಿ ನಡೆಸಲಾಗುವುದು.

ಮೌಖಿಕ ಸಂದರ್ಶನಕ್ಕೆ ಅರ್ಹರಾಗಿರುವ ಅಭ್ಯರ್ಥಿಗಳಿಗೆ ಸಂದರ್ಶನ ಸೂಚನಾ ಪತ್ರಗಳನ್ನು ಈಗಾಗಲೇ ರವಾನಿಸಲಾಗಿದೆ. ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ಸಂದರ್ಶನ ಸೂಚನಾಪತ್ರಗಳನ್ನು ಕಡ್ಡಾಯವಾಗಿ ಸಂದರ್ಶನದ ವೇಳೆ ಹಾಜರುಪಡಿಸತಕ್ಕದ್ದು, ಒಂದು ವೇಳೆ ಸೂಚನಾಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ, ಮೌಖಿಕ ಸಂದರ್ಶನಕ್ಕೆ ಅವಕಾಶ ನೀಡುವುದಿಲ್ಲ. ಆದ್ದರಿಂದ ಸೂಚನಾಪತ್ರಗಳು ಡಿಸೆಂಬರ್ 26 ಒಳಗಾಗಿ ತಲುಪದೇ ಇರುವ ಅರ್ಹ ಅಭ್ಯರ್ಥಿಗಳು ಆಯೋಗದ ಕೇಂದ್ರ ಕಚೇರಿಯನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080-3054944/30574945 ಅನ್ನು ಸಂಪರ್ಕಿಸಿ ಸೂಚನಾ ಪತ್ರಗಳನ್ನು ಪಡೆಯಲು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಕವನ:ಜಿಪಿಆರ್.

## ಅರಸು ಮತ್ತು ಆಧುನಿಕ ಕರ್ನಾಟಕ-

# ರಾಜ್ಯ ಮಟ್ಟದ ವಿಚಾರ ಸಂಕಿರಣ

ಬೆಂಗಳೂರು, ಡಿಸೆಂಬರ್ 26:

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಡಿ.ದೇವರಾಜ ಅರಸು ಜನ್ಮಶತಮಾನೋತ್ಸವ ಸಮಿತಿಯು ದೇವರಾಜ ಅರಸು ಅವರ ಶತಮಾನೋತ್ಸವವನ್ನು ಡಿಸೆಂಬರ್ 30 ರಂದು ಬೆಳಗ್ಗೆ 10.00 ಗಂಟೆಗೆ ಸೆಂಟ್ರಲ್ ಕಾಲೇಜು ಆವರಣದಲ್ಲಿ ಆಯೋಜಿಸಿದೆ.

ಶತಮಾನೋತ್ಸವದ ಉದ್ಘಾಟನೆಯನ್ನು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ನೆರವೇರಿಸಲಿದ್ದಾರೆ. ಅಧ್ಯಕ್ಷತೆಯನ್ನು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶ್ರೀ ಹೆಚ್.ಆಂಜನೇಯ ವಹಿಸುವರು. ಮುಖ್ಯ ಅತಿಥಿಗಳಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರಾದ ಟಿ.ಬಿ.ಜಯಚಂದ್ರ, ಕಂದಾಯ ಸಚಿವ ವಿ.ಶ್ರೀನಿವಾಸ ಪ್ರಸಾದ್, ಮೂಲ ಸೌಲಭ್ಯ, ವಾರ್ತಾ ಮತ್ತು ಹಜ್ ಸಚಿವ ಆರ್.ರೋಷನ್ ಬೇಗ್, ಬಿಬಿಎಂಪಿ ಮಹಾಪೌರರಾದ ಕೆ.ಎನ್.ಮಂಜುನಾಥ ರೆಡ್ಡಿ, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಬೆಂಗಳೂರು ನಗರಾಭಿವೃದ್ಧಿ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಕನ್ನಡ ಸಂಸ್ಕೃತಿ ಇಲಾಖೆ ಸಚಿವರಾದ ಶ್ರೀಮತಿ ಉಮಾಶ್ರೀ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಹಾಗೂ ಲೋಕಸಭಾ ಸದಸ್ಯ ಪಿ.ಸಿ.ಮೋಹನ್ ಭಾಗವಹಿಸಲಿದ್ದಾರೆ.

ಶತಮಾನೋತ್ಸವದ ಅಂಗವಾಗಿ '**ಅರಸು ಮತ್ತು ಆಧುನಿಕ ಕರ್ನಾಟಕ** '-ರಾಜ್ಯ ಮಟ್ಟದ ವಿಚಾರ ಸಂಕಿರಣ ಹಾಗೂ ' **ಅರಸು ಮತ್ತು ಸಾಮಾಜಿಕ ನ್ಯಾಯ**' ಸಂವಾದ ಗೋಷ್ಠಿಯನ್ನು ಏರ್ಪಡಿಸಿದೆ.

ವಿಚಾರ ಸಂಕಿರಣವು ಬೆಳಗ್ಗೆ 11.30 ಗಂಟೆಗೆ ನಡೆಯಲಿದ್ದು ಅಧ್ಯಕ್ಷತೆಯನ್ನು ಜನಪದ ಚಿಂತಕರಾದ ಡಾ: ಹಿ.ಶಿ.ರಾಮಚಂದ್ರೇಗೌಡ ವಹಿಸುವರು. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ದಿನೇಶ್ ಅಮಿನ್‌ಮಟ್ಟು ಅವರು ಆಶಯ ಭಾಷಣ ಮಾಡಲಿದ್ದಾರೆ. **ಅರಸು- ರಾಜಕೀಯ ತಾತ್ವಿಕತೆ** ಕುರಿತು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ: ಬಂಜಗೆರೆ ಜಯಪ್ರಕಾಶ್ ಅವರು ತಮ್ಮ ಪ್ರಬಂಧ ಮಂಡಿಸಲಿದ್ದಾರೆ. ಹಂಪಿಯ ಕನ್ನಡ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರಾದ ಡಾ: ಎಂ.ಚಂದ್ರ ಪೂಜಾರಿಯವರು ಅರಸು ಮತ್ತು ಅಭಿವೃದ್ಧಿ ಕುರಿತು ಮಾತನಾಡಲಿದ್ದಾರೆ.

ಮಧ್ಯಾಹ್ನ 2.30 ಗೆ **ಅರಸು ಮತ್ತು ಸಾಮಾಜಿಕ ನ್ಯಾಯ ಕುರಿತು ಸಂವಾದ ಗೋಷ್ಠಿ ಇದೆ**. ಗೋಷ್ಠಿಯ ಅಧ್ಯಕ್ಷತೆಯನ್ನು ವಿಧಾನ ಸಭಾ ಸದಸ್ಯರು ಹಾಗೂ ಮಾಜಿ ವಿಧಾನಸಭಾ ಸಭಾಧ್ಯಕ್ಷರಾದ ಕೆ.ಆರ್.ರಮೇಶ್ ಕುಮಾರ್ ವಹಿಸಲಿದ್ದಾರೆ.